## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರ ಹಾಗೂ ಶ್ರೀ ಧನಂಜಯ ಸರ್ಜಿ ಇವರುಗಳು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

### ವಿಷಯ

ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯ ನೌಕರರಿಗೆ ಪಿ.ಎಸ್.ಎಸ್. ಥಾಮಸ್ ವರದಿ ಅಂಗೀಕರಿಸಿ 10 ವರ್ಷಗಳಾದರೂ ಸಹಿತ ಗ್ರ್ಯಾಂಟ್ ಇನ್ ಕೋಡ್ ನಿಯಮಾವಳಿಗಳನ್ನು ಅಂತಿಮಗೊಳಿಸದೆ ವಿಳಂಬ ಮಾಡಿದ ಹಿನ್ನೆಲೆಯಲ್ಲಿ, ಸಿಬ್ಬಂದಿಯವರಿಗೆ ಸೇವಾ ಭದ್ರತೆ, ಸ್ವಯಂ ನಿವೃತ್ತಿ, ಅನುಕಂಪ ಆಧಾರದ ನೇಮಕಾತಿ, ಒಂದು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಇನ್ನೊಂದು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗೆ ವರ್ಗಾವಣೆ ಆಗುವ ಹಾಗೂ ಇನ್ನಿತರ ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವವರ ಬಗ್ಗೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಇಲಾಖೆ ಸಚಿವರ ಗಮನ ಸೆಳೆಯುವುದು.

### ಹೇಳಿಕೆ

ಶ್ರೀ ಪಿ.ಎಸ್.ಎಸ್.ಥಾಮಸ್ ವರದಿಯಲ್ಲಿನ ಬಹುತೇಕ ಶಿಫಾರಸುಗಳನ್ನು ಜಾರಿಗೊಳಿಸಲಾಗಿದ್ದು, ಬಾಕಿ ಉಳಿದಿರುವ ಶಿಫಾರಸುಗಳನ್ನು ಜಾರಿಗೊಳಿಸುವ ಕುರಿತಂತೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. ಇದರ ಭಾಗವಾಗಿ ಪ್ರಸ್ತುತ ಜಾರಿಯಲ್ಲಿರುವ Grant-in-aid Code for Industrial Training Institutes in Karnataka 1997 ಅನ್ನು ಪರಿಷ್ಕರಿಸಿ, ದಿನಾಂಕ: 30.01.2023ರಂದು Karnataka Technical Education Institutions (Grant-in-Aid Private Industrial Training Institutes) Rules 2023 ಅನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಸದರಿ ಕರಡು ನಿಯಮಾವಳಿಗಳಿಗೆ ಆಕ್ಷೇಪಣೆ ಸಲ್ಲಿಸಲು ನೀಡಲಾಗಿದ್ದ ಕಾಲಾವಧಿಯಲ್ಲಿ ಸ್ವೀಕೃತವಾಗಿದ್ದ ಆಕ್ಷೇಪಣೆಗಳು ಪರಿಶೀಲನಾ ಹಂತದಲ್ಲಿರುತ್ತವೆ. ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ವರದಿ ನೀಡಲು ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ವರದಿ ನೀಡಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು.

**ಕೌಉಜೀಇ 41 ಕೈತಪ್ರ 2025**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.